ಕಾಲೇಜುಗಳಿಗೆ ಕಟ್ಟಡ ಇಲ್ಲದಿರುವುದು

817 (1343) ಶ್ರೀ ಸುಭಾಷ ಆರ್. ಗುತ್ತೇದಾರ್ (ಆಳಂದ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಳಂದ ತಾಲ್ಲೂಕಿನಲ್ಲಿ ಎರಡು ಪ್ರಥಮ ದರ್ಜೆ ಕಾಲೇಜುಗಳಿಗೆ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕಟ್ಟಡವನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಈವರೆವಿಗೂ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣವೇನು?

ಈ) ಸರ್ಕಾರ ಕಟ್ಟಡದ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಉ) ಕಟ್ಟಡ ಕಾಮಗಾರಿಗಾಗಿ ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ?

ಊ) ಹಾಗಿದ್ದಲ್ಲಿ, ಬಿಡುಗಡೆ ಮಾಡಲಾದ ಅನುದಾನದ ಮೊತ್ತವೆಷ್ಟು; (ವಿವರ ನೀಡುವುದು)?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಳಂದ: 2007– 08ನೇ ಸಾಲಿನಲ್ಲಿ ಕಾಲೇಜನ್ನು ಪ್ರಾರಂಭಿಸಲಾಗಿದ್ದು, ಪ್ರಸ್ತುತ ಬಿ.ಎ., ಬಿ.ಬಿ.ಎಂ. ಕೋರ್ಸುಗಳನ್ನೊಳಗೊಂಡಂತೆ 347 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಕಾಲೇಜಿಗೆ ದಿನಾಂಕ: 05–02–2008 ರಂದು ನಿವೇಶನವು ದಾನ ರೂಪದಲ್ಲಿ ದೊರೆತಿದ್ದು, ಸ್ವಂತ ಕಟ್ಟಡ ನಿರ್ಮಿಸುವ ಸಲುವಾಗಿ ರೂ. 75.00 ಲಕ್ಷಗಳ ಅಂದಾಜು ಮೊತ್ತಕ್ಕೆ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಗೆ ವಹಿಸಿ ಕಾರ್ಯದೇಶ ನೀಡಲಾಗಿದ್ದು, ಕಾಮಗಾರಿ ಪ್ರಾರಂಭಿಸಲಾಗಿದೆ.

ಸರ್ಕಾರಿ ಪ್ರಥಮದರ್ಜೆ ಕಾಲೇಜು, ಮಾದನಹಿಪ್ಪರಗಾ: 2007–08ನೇ ಸಾಲಿನಲ್ಲಿ ಕಾಲೇಜನ್ನು ಪ್ರಾರಂಭಿಸಲಾಗಿದ್ದು, ಪ್ರಸ್ತುತ , ಬಿ.ಎ., ಬಿ.ಬಿ.ಎಂ. ಕೋರ್ಸುಗಳನ್ನೊಳಗೊಂಡಂತೆ 73 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಸದರಿ ಕಾಲೇಜಿಗೆ ನಿವೇಶನವು ದಾನ ರೂಪದಲ್ಲಿ ದೊರೆತಿದ್ದು, ಸ್ವಂತ ಕಟ್ಟಡ ನಿರ್ಮಿಸುವ ಸಲುವಾಗಿ ರೂ.121.00 ಲಕ್ಷಗಳ ಅಂದಾಜು ಮೊತ್ತಕ್ಕೆ ನೆರೆಸಂತ್ರಸ್ಥರ ಪ್ರದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ನಬಾರ್ಡ್ ಆರ್.ಐ.ಡಿ.ಎಫ್–15 ರಡಿ ಅನುದಾನ ಒದಗಿಸುವಂತೆ ಕೋರಿ ಪ್ರಸ್ತಾವನೆಯನ್ನು ನಬಾರ್ಡ್‌ಗೆ ಸಲ್ಲಿಸಲಾಗಿರುತ್ತದೆ. ಅನುದಾನ ಮಂಜೂರಾದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಈ) **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಳಂದ:** ಕಟ್ಟಡ ಕಾಮಗಾರಿಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾದನಹಿಪ್ಪರಗಾ: ಕಟ್ಟಡ ಕಾಮಗಾರಿಗೆ ನಬಾರ್ಡ್ ಆರ್.ಐ.ಡಿ.ಎಫ್– 15 ರಡಿಯಲ್ಲಿ ಕೋರಿರುವ ಅನುದಾನ ಮಂಜೂರಾದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಉ) ಆಳಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅನುದಾನ ಒದಗಿಸಲಾಗಿದೆ.

ಊ) **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಳಂದ:** ರೂ.75.00 ಲಕ್ಷಗಳ ಅಂದಾಜಿಗೆ 2007–08ನೇ ಸಾಲಿನಲ್ಲಿ ರೂ.22.50 ಒದಗಿಸಲಾಗಿತ್ತು. ಕಾಮಗಾರಿ ಪ್ರಗತಿಯನ್ನಾಧರಿಸಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜು ಸ್ಥಾಪನೆ

818 (780) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ॥ ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ತಾಲ್ಲೂಕುಗಳಲ್ಲಿ ಒಂದಗಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಬಗ್ಗೆ ಸರ್ಕಾರ ಗಮನ ಹರಿಸುವುದೇ?